ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 6/2/2020

# ಲಕ್ಷ್ಮಣ ಸವದಿ ನಾಮಪತ್ರ ಸಲ್ಲಿಕೆ

ಪ್ರಜಾವಾಣಿ ವಾರ್ತೆ 6-2-20

ಬೆಂಗಳೂರು: ವಿಧಾನಪರಿಷತ್ತಿನಲ್ಲಿ ತೆರವಾಗಿರುವ ಒಂದು ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿಯಾಗಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಬುಧವಾರ ನಾಮಪತ್ರ ಸಲ್ಲಿಸಿದರು.

ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯುವ ಈ ಚುನಾವಣೆಗೆ ಕಾಂಗ್ರೆಸ್ ಮತ್ತು ಜೆಡಿಎಸ್ ಅಭ್ಯರ್ಥಿಗಳನ್ನು ಕಣಕ್ಕಿಳಿಸಿಲ್ಲ. ನಾಮಪತ್ರ ಸಲ್ಲಿಕೆಗೆ ಗುರುವಾರ ಕೊನೆಯ ದಿನವಾಗಿದ್ದು, ಈ ಎರಡೂ ಪಕ್ಷಗಳು ಅಭ್ಯರ್ಥಿಗಳನ್ನು ಕಣಕ್ಕಿಳಿಸದಿದ್ದರೆ ಸವದಿ ಅವಿರೋಧವಾಗಿ ಆಯ್ಕೆಯಾಗಲಿದ್ದಾರೆ.



ವಿಧಾನಪರಿಷತ್ತಿನ ಒಂದು ಸ್ಥಾನಕ್ಕೆ ನಡೆಯುವ ಚುನಾವಣೆಗೆ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಬುಧವಾರ ನಾಮಪತ್ರ ಸಲ್ಲಿಸಿದರು. ಉಪಮುಖ್ಯಮಂತ್ರಿ ಡಾ.ಅಶ್ವತ್ಥ ನಾರಾಯಣ, ಸಚಿವ ವಿ.ಸೋಮಣ್ಣ ಮತ್ತು ಇತರರು ಇದ್ದರು.

ನಾಮಪತ್ರ ಸಲ್ಲಿಕೆಯ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಸವದಿ, 'ಇದೇ 19 ರೊಳಗೆ ವಿಧಾನಸಭೆ ಅಥವಾ ವಿಧಾನಪರಿಷತ್ತಿನ ಸದಸ್ಯನಾಗಿ ಆಯ್ಕೆಯಾಗಬೇಕಿತ್ತು. ಇಲ್ಲವಾದರೆ, ಸಚಿವ ಸ್ಥಾನ ಉಳಿಸಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ. ವಿಧಾನಪರಿಷತ್ತಿಗೆ ನಾಮಪತ್ರ ಸಲ್ಲಿಸಿದ್ದೇನೆ. ಅವಿರೋಧವಾಗಿ ಆಯ್ಕೆಯಾಗುವ ವಿಶ್ವಾಸವಿದೆ' ಎಂದು ಹೇಳಿದರು. ಚುನಾವಣಾಧಿಕಾರಿಯೂ ಆಗಿರುವ ವಿಧಾನಸಭಾ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು.